ಇ) ಕೆ.ಐ.ಎ.ಡಿ.ಬಿ.ಯ ಯಿಂದ ಕಂಪನಿಗಳಿಗೆ ಜಮೀನನ್ನು ಮಂಜೂರು ಮಾಡುವಾಗ ಈ ಕೆಳಕಂಡ ಸಮಿತಿ ಸಭೆಗಳಲ್ಲಿ ಅನುಮೋದನೆ ಯಾದಂತಹ ಕೈಗಾರಿಕೆಗಳಿಗೆ ಜಮೀನು ಹಂಚಿಕೆ ಮಾಡಲಾಗುವುದು ಹಾಗೂ ಕೈಗಾರಿಕೋದ್ಯಮಿಗಳಿಗೆ ನಿವೇಶನ ಹಂಚಿಕೆ ಮಾಡುವಾಗ ಅನುಸರಿಸಬೇಕಾದ ಮಾನದಂಡಗಳ ಬಗ್ಗೆ ಅನುಬಂಧ–2 ಲಗತ್ತಿಸಿದೆ.

1. ರಾಜ್ಯ ಉನ್ನತ ಮಟ್ಟದ ಅಧಿಕಾರಯುತ ಸಮಿತಿ ಸಭೆ
2. ರಾಜ್ಯ ಮಟ್ಟದ ಏಕಗವಾಕ್ಷಿ ಸಮಿತಿ ಸಭೆ,
3. ಜಿಲ್ಲಾ ಮಟ್ಟದ ಏಕಗವಾಕ್ಷಿ ಸಮಿತಿ ಸಭೆ, ಹಾಗೂ
4. ಮಂಡಳಿಯ ಹಂಚಿಕೆ ಸಮಿತಿ ಸಭೆ ನಿರ್ಣಯದನ್ವಯ ಜಮೀನನ್ನು ಕೈಗಾರಿಕಾ ಘಟಕಗಳಿಗೆ ಹಂಚಿಕೆ ಮಾಡಲಾಗುವುದು.

ಈ) ಪ್ರಸ್ತುತ ಸದರಿ ಪ್ರದೇಶದಲ್ಲಿ ಹಂಚಿಕೆ ಮಾಡಲಾದ ಕಂಪನಿಗಳ ಮಾಲೀಕರು ಹಾಗೂ ಅವರ ಹೆಸರು ವಿಳಾಸಗಳನ್ನು ಅನುಬಂಧ–3 ರಲ್ಲಿ ಲಗತ್ತಿಸಲಾಗಿದೆ.

ಗುಲ್ಬರ್ಗಾ ಜಿಲ್ಲೆ ಶಿಕ್ಷಣ ಇಲಾಖೆಗೆ ಬಿಡುಗಡೆ ಮಾಡಿರುವ ಅನುದಾನ

701 (1222) ಶ್ರೀ ಸುಭಾಷ್ ಆರ್. ಗುತ್ತೇದಾರ್ (ಅಳಂದ) : ಮಾನ್ಯ ಸಣ್ಣ ನೀರಾವರಿ, ಯೋಜನೆ ಮತ್ತು ಸಾಂಖ್ಯಿಕ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕಳೆದ 3 ವರ್ಷಗಳಲ್ಲಿ ಡಾ॥ ನಂಜುಂಡಪ್ಪ ವರದಿಯನ್ವಯ ಗುಲ್ಬರ್ಗಾ ಜಿಲ್ಲೆಯ ಶಿಕ್ಷಣ ಇಲಾಖೆಗೆ ಬಿಡುಗಡೆ ಮಾಡಿರುವ ಅನುದಾನದ ಮೊತ್ತ ಎಷ್ಟು? (ತಾಲ್ಲೂಕುವಾರು ವಿವರಗಳನ್ನು ನೀಡುವುದು);

ಆ) ಈ ಅನುದಾನದಿಂದ ಶಿಕ್ಷಣ ಇಲಾಖೆಯಲ್ಲಿ ಯಾವ ಯೋಜನೆಗಳನ್ನು ಕೈಗೆತ್ತಿಕೊಳ್ಳಲಾಗಿದೆ (ವಿವರ ನೀಡುವುದು);

ಇ) ಗುಲ್ಬರ್ಗಾ ಜಿಲ್ಲೆಯಲ್ಲಿ ಶಿಕ್ಷಣವನ್ನು ಉತ್ತೇಜಿಸಲು ಸರ್ಕಾರ ಇನ್ನು ಹೆಚ್ಚಿನ ಅನುದಾನವನ್ನು ನೀಡಲು ಕ್ರಮಕೈಗೊಳ್ಳುವುದೇ?

ಶ್ರೀ ಗೋವಿಂದ ಎಂ. ಕಾರಜೋಳ (ಸಣ್ಣ ನೀರಾವರಿ, ಯೋಜನೆ ಮತ್ತು ಸಾಂಖ್ಯಿಕ ಸಚಿವರು) :

ಅ) ಕಳೆದ 3 ವರ್ಷಗಳಲ್ಲಿ ಡಾ॥ ನಂಜುಂಡಪ್ಪ ವರದಿಯನ್ವಯ ಗುಲ್ಬರ್ಗಾ ಜಿಲ್ಲೆಯ ಶಿಕ್ಷಣ ಇಲಾಖೆಗೆ ಬಿಡುಗಡೆ ಮಾಡಿರುವ ಅನುದಾನದ ತಾಲ್ಲೂಕುವಾರು ವಿವರ ಹೀಗಿದೆ.

(ಲಕ್ಷ ರೂ.ಗಳಲ್ಲಿ)

ತಾಲ್ಲೂಕು	2007–08	2008–09	2009–10 (ಜನವರಿ 2010 ಅಂತ್ಯಕ್ಕೆ)
ಅಫಜಲ್‌ಪುರ	ಹೆಣ್ಣು ಮಕ್ಕಳಿಗಾಗಿ ಆಗಿರುವ ಬಿಡುಗಡೆ	187–86	101.77
ಆಳಂದ		195.35	289.8
ಚಿಂಚೋಳಿ		164.97	227.59
ಚಿತ್ತಾಪುರ		316.77	255.48
ಗುಲ್ಬರ್ಗ		40.88	
ಜೇವರ್ಗಿ		226.93	248.91
ಸೇಡಂ		166.17	66.52
ಶಾಹಪುರ		193.57	320.49
ಶೋರಾಪುರ		252.22	147.17
ಯಾದಗೀರ್		211.82	174.49
ಒಟ್ಟು ಗುಲ್ಬರ್ಗ ಜಿಲ್ಲೆ		**1956.54**	**1832.22**

ಆ) ಈ ಅನುದಾನದಿಂದ ಶಿಕ್ಷಣ ಇಲಾಖೆಯಲ್ಲಿ 1) ಮಾದರಿ ಪ್ರೌಢಶಾಲೆ ಪ್ರಾರಂಭಿಸುವುದು 2) ಹಿಂದುಳಿದ ತಾಲ್ಲೂಕುಗಳಲ್ಲಿ ಶಿಕ್ಷಕರಿಗೆ ವಸತಿ ಗೃಹಗಳ ಸಮೂಹ ಸಂಕೀರ್ಣ 3) ಅವಶ್ಯಕತೆ ಇರುವ ಶಾಲೆಗಳಿಗೆ ನೀರು ಮತ್ತು ಶೌಚಾಲಯ ವ್ಯವಸ್ಥೆ 4) ಪ್ರೌಢಶಾಲೆಗಳಿಗೆ ಮೂಲಭೂತ ಸೌಲಭ್ಯ ಒದಗಿಸುವುದು 5) ಹೆಣ್ಣುಮಕ್ಕಳಿಗಾಗಿ ಕೆಜಿಬಿವಿ ಮಾದರಿ ಶಾಲೆಯ ಪ್ರಾರಂಭಿಸುವುದು ಮುಂತಾದ ಯೋಜನೆಗಳನ್ನು ಕೈಗೆತ್ತಿಕೊಳ್ಳಲಾಗಿದೆ.

ಇ) ಕ್ರಮ ಕೈಗೊಳ್ಳಲಾಗುವುದು.